ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರಡಿ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳನ್ನು ಪದನಾಮೀಕರಿಸುವ ಬಗ್ಗೆ.

**ಓದಲಾಗಿದೆ:** 1) ಕೇಂದ್ರ ಸರ್ಕಾರದ ದಿನಾಂಕ: 05.07.2013ರ ರಾಷ್ಟ್ರೀಯ ಭದ್ರತಾ ಕಾಯ್ದೆ 2013ರ ಅಧಿಸೂಚನೆ

2) ಸರ್ಕಾರದ ಆದೇಶ ಸಂಖ್ಯೆ: ಆನಾಸ 52 ಡಿಆರ್‌ಎ 2012 ದಿನಾಂಕ:05.09.2013

**ಪ್ರಸ್ತಾವನೆ:**

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರ ಸೆಕ್ಷನ್ 14ರಡಿ ರಾಜ್ಯಗಳು ಆಂತರಿಕ ಕುಂದುಕೊರತೆಗಳ ನಿವಾರಣೆಗಾಗಿ ಕರೆ ಕೇಂದ್ರಗಳು, ಸಹಾಯವಾಣಿಗಳು, ನೋಡಲ್ ಅಧಿಕಾರಿಗಳ ಪದನಾಮೀಕರಣ ಇತ್ಯಾದಿ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶನವಿರುತ್ತದೆ. ಅದರಂತೆ, ರಾಜ್ಯದಲ್ಲಿ ಈಗಾಗಲೆ ಕರೆ ಕೇಂದ್ರ ಮತ್ತು ಸಹಾಯವಾಣಿಯನ್ನು ಪ್ರಾರಂಭಿಸಲಾಗಿರುತ್ತದೆ ಹಾಗೂ ಎಲ್ಲಾ ಜಿಲ್ಲೆಗಳಲ್ಲಿ ಉಪನಿರ್ದೇಶಕರುಗಳ (ಆಹಾರ) ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ನಿರ್ದೇಶಕರನ್ನು ನೋಡಲ್ ಅಧಿಕಾರಿಗಳಾಗಿ, ಜಿಲ್ಲೆಯ ಜಿಲ್ಲಾಧಿಕಾರಿಗಳನ್ನು ಜಿಲ್ಲಾ ಕುಂದುಕೊರತೆ ನಿವಾರಣಾಧಿಕಾರಿಗಳಾಗಿ (DGRO) ಮೇಲೆ ಉಲ್ಲೇಖ (2)ರಲ್ಲಿ ಓದಲಾದ ಆದೇಶದ ಮೂಲಕ ಪದನಾಮೀಕರಿಸಲಾಗಿರುತ್ತದೆ.

ಕೇಂದ್ರ ಸರ್ಕಾರದ ನಿರ್ದೇಶನದಂತೆ, ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿ ಕುಂದು ಕೊರತೆ ನಿವಾರಣಾ ಅರ್ಜಿಗಳ ವಿಲೇವಾರಿ ಪ್ರಗತಿಯನ್ನು ರಾಜ್ಯಗಳು ಪ್ರತಿ ಮಾಹೆ ಸಲ್ಲಿಸಬೇಕಾಗಿರುತ್ತದೆ. ಆದರೆ, ಜಿಲ್ಲಾ ಮಟ್ಟದಲ್ಲಿ ಮಾತ್ರ ನೋಡಲ್ ಅಧಿಕಾರಿಗಳನ್ನು ನೇಮಿಸಿರುವುದರಿಂದ ಸಕಾಲದಲ್ಲಿ ಅರ್ಜಿಗಳನ್ನು ವಿಲೇವಾರಿಗೊಳಿಸಲು ಮತ್ತು ಮಾಹಿತಿಯನ್ನು ಕ್ರೋಢೀಕರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸುವಲ್ಲಿ ವಿಳಂಬವಾಗುತ್ತಿದೆ. ಈ ಹಿನ್ನೆಲೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ಪದನಾಮೀಕರಿಸುವ ಅವಶ್ಯಕತೆ ಇರುವ ಕಾರಣ ಈ ಕೆಳಗಿನಂತೆ ಆದೇಶಿಸಿದೆ;

**ಸರ್ಕಾರದ ಆದೇಶ ಸಂಖ್ಯೆ: ಆನಾಸ 52 ಡಿಆರ್‌ಎ 2012 (ಭಾಗ-1)**
**ಬೆಂಗಳೂರು, ದಿನಾಂಕ:24.03.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013ರ ಸೆಕ್ಷನ್ 14ರಡಿ ಆಂತರಿಕ ಕುಂದುಕೊರತೆ ನಿವಾರಣೆಗಾಗಿ ರಾಜ್ಯದ ಎಲ್ಲಾ ತಾಲ್ಲೂಕುಗಳ ಗ್ರೇಡ್-1 ತಹಶೀಲ್ದಾರವರನ್ನು ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳಾಗಿ ಪದನಾಮೀಕರಿಸಿ ಆದೇಶಿಸಿದೆ.

ಈ ಆದೇಶವನ್ನು ಕಂದಾಯ ಇಲಾಖೆಯು ಕಡತ ಸಂಖ್ಯೆ: ಆನಾಸ 52 ಡಿಆರ್‌ಎ 2012 (ಭಾಗ-1) ರ ಕಂಡಿಕೆ 34ರಲ್ಲಿ ದಿನಾಂಕ: 14.03.2017ರಂದು ನೀಡಿರುವ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

ಅರ್ಚನ ಎಂ.ಎಸ್. 24/3/2017
(ಅರ್ಚನ ಎಂ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆ.

ದಾಖಲೆ.
PD IV
31/3/17

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒದಗಿಸಲು ಕೋರಿದೆ

. . . .2

U/S
30/3